ನಿಯಮ 330,
ಕ್ರಮಸಂಖ್ಯೆ. 77.

**ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ ಇವರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನೆ ಸಂಖ್ಯೆ:77 "ರಾಜ್ಯ ಮಹಾನಗರ ಪಾಲಿಕೆ, ನಗರ ಪಾಲಿಕೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮಪಂಚಾಯಿತಿಗಳಲ್ಲಿ ವನ್ಯಜೀವಿ ಸಂರಕ್ಷಕರು (ಹಾವು, ರಣಹದ್ದು, ಬಾವಲಿ ಇತ್ಯಾದಿ) ಸೇರಿದಂತೆ ವನ್ಯಜೀವಿಗಳನ್ನು ಸಂರಕ್ಷಿಸುವರ ಜೀವನ ಅತ್ಯಂತ ಧಾರುಣ ಪರಿಸ್ಥಿತಿಯಲ್ಲಿದ್ದು, ವನ್ಯಜೀವಿ ಸಂರಕ್ಷಿಸುವ ಸಂದರ್ಭದಲ್ಲಿ ಹಲವಾರು ಜನರು ಮರಣ ಹೊಂದಿದ್ದು ಅವರ ಕುಟುಂಬಕ್ಕೆ ಸರ್ಕಾರದಿಂದ ಯಾವುದೇ ಸಹಾಯಧನ ಮತ್ತು ಅವರಿಗೆ ಕನಿಷ್ಠ ವೇತನ ಜಾರಿಗೊಳಿಸಿ ಅವರಿಗೆ ಸೇವಾ ಭದ್ರತೆ ಒದಗಿಸುವ ಕುರಿತು" ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ.**

*****

ರಾಜ್ಯ ಮಹಾನಗರ ಪಾಲಿಕೆ, ನಗರ ಪಾಲಿಕೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮಪಂಚಾಯಿತಿಗಳಲ್ಲಿ (ಹಾವು, ರಣಹದ್ದು, ಬಾವಲಿ ಇತ್ಯಾದಿ) ಸೇರಿದಂತೆ ವನ್ಯಜೀವಿಗಳನ್ನು ಸಂರಕ್ಷಿಸುವರನ್ನು ಅರಣ್ಯ ಇಲಾಖೆಯಿಂದ ಯಾವುದೇ ಖಾಯಂ/ಗುತ್ತಿಗೆ ಆಧಾರದಲ್ಲಿ ವನ್ಯಜೀವಿ ಸಂರಕ್ಷಕರನ್ನು ನೇಮಿಸಿರುವುದಿಲ್ಲ.

ಅರಣ್ಯ ಇಲಾಖೆಯಿಂದ ಯಾವುದೇ ಖಾಯಂ/ಗುತ್ತಿಗೆ ಆಧಾರದಲ್ಲಿ ವನ್ಯಜೀವಿ ಸಂರಕ್ಷಕರನ್ನು ನೇಮಿಸಿರುವುದಿಲ್ಲವಾದ್ದರಿಂದ, ಅಂತಹವರ ಕುಟುಂಬಕ್ಕೆ ಯಾವುದೇ ಸಹಾಯಧನ ಮತ್ತು ಅವರಿಗೆ ಕನಿಷ್ಠ ವೇತನ ಜಾರಿಗೊಳಿಸಿ ಸೇವಾ ಭದ್ರತೆ ಒದಗಿಸಲು ಅವಕಾಶ ಇರುವುದಿಲ್ಲ.

ಅರಣ್ಯ ಇಲಾಖೆಯು ಆನೆ, ಹುಲಿ, ಕರಡಿ, ಚಿರತೆ, ಜಿಂಕೆ ಇತ್ಯಾದಿ ವನ್ಯ ಪ್ರಾಣಿಗಳಿಂದ ಉಂಟಾಗುವ ಮಾನವ ಪ್ರಾಣ ಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಅಂಗವಿಕಲತೆ ಗಾಯಗೊಂಡ ಪ್ರಕರಣಗಳಲ್ಲಿ ನೀಡುತ್ತಿರುವ ಪರಿಹಾರಧನ ಮತ್ತು ಮಾಶಾಸನ ಧನವನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್.ಡಬ್ಲ್ಯೂ.ಎಲ್ 2022, ದಿನಾಂಕ:15.12.2022 ರ ಪ್ರಕಾರ ನಿಯಮಾನುಸಾರ ಪಾವತಿಸಲಾಗುತ್ತಿದೆ.

ವನ್ಯಪ್ರಾಣಿಗಳು ಜನ ವಸತಿ ಪ್ರದೇಶಗಳಿಗೆ ಬಂದ ಸಂಧರ್ಭದಲ್ಲಿ ಅರಣ್ಯ ಪ್ರದೇಶಕ್ಕೆ ಹಿಂದಿರುಗಿಸಲು ಹಾಗೂ ಅನಿವಾರ್ಯ ಪರಿಸ್ಥಿತಿಯಲ್ಲಿ ಅವುಗಳನ್ನು ಹಿಡಿಯಲು ಇಲಾಖಾ ವತಿಯಿಂದ ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ.

**ನಗರಾಭಿವೃದ್ಧಿ ಇಲಾಖೆಯ ಉತ್ತರ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ – ಅರಣ್ಯ ಘಟಕದ ವ್ಯಾಪ್ತಿಯಲ್ಲಿ 7 ವನ್ಯಜೀವಿ ಸಂರಕ್ಷಕರುಗಳು ಗೌರವಧನದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿಯವರಿಗೆ ಮಾಸಿಕ 18,000/- ಗಳ ಗೌರವ ಧನ ನೀಡಲಾಗುತ್ತಿದೆ.

ವನ್ಯಜೀವಿ ಸಂರಕ್ಷಕರು ವನ್ಯಜೀವಿಗಳನ್ನು ಸಂರಕ್ಷಿಸುವ ಸಂದರ್ಭದಲ್ಲಿ ಮರಣ ಹೊಂದಿದ್ದಲ್ಲಿ ಅವರ ಕುಟುಂಬಕ್ಕೆ ಸಹಾಯ ಧನ ನೀಡುವ ಯೋಜನೆ ಇರುವುದಿಲ್ಲ.

ರಾಜ್ಯದ ಮಹಾನಗರ ಪಾಲಿಕೆಗಳ ವೃಂದ ಮತ್ತು ನೇಮಕಾತಿ ನಿಯಮಗಳು 2011ರಲ್ಲಿ ವನ್ಯಜೀವಿ ಸಂರಕ್ಷಕರ ಹುದ್ದೆಗಳು ಮಂಜೂರಾಗಿರುವುದಿಲ್ಲ. ವನ್ಯಜೀವಿಗಳನ್ನು ಸಂರಕ್ಷಿಸುವ ಸಂದರ್ಭದಲ್ಲಿ ಮರಣ ಹೊಂದಿದ್ದಲ್ಲಿ ಸಹಾಯಧನ ಅಥವಾ ಅವರಿಗೆ ಕನಿಷ್ಠ ವೇತನ ಜಾರಿಗೊಳಿಸುವ ಅಥವಾ ಸೇವಾ ಭದ್ರತೆಯನ್ನು ಒದಗಿಸುವ ಯಾವುದೇ ಪ್ರಸ್ತಾವನೆಯು ಮಹಾನಗರ ಪಾಲಿಕೆಗಳಲ್ಲಿ ಇರುವುದಿಲ್ಲ.

---

**ಸಂಖ್ಯೆ: ಅಪಜೀ 120 ಎಫ್‌ಡಬ್ಲ್ಯೂಎಲ್ 2024**

**(ಈಶ್ವರ ಬಿ.ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು